ಕರ್ನಾಟಕ ವಿಧಾನಸಭೆ

ಶುಕ್ರವಾರ 24ನೇ ನವೆಂಬರ್ 2000 ಸದನವು ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 9 ಗಂಟೆ 50 ನಿಮಿಷಕ್ಕೆ ಸಮಾವೇಶಗೊಂಡಿತು. ಅಧ್ಯಕ್ಷರಾದ ಶ್ರೀ ಎಂ.ವಿ. ವೆಂಕಟಪ್ಪ ಅವರು ಪೀಠದಲ್ಲಿ ಉಪಸ್ಥಿತರಿದ್ದರು.

1. ಅಧ್ಯಕ್ಷರ ಅಪ್ಪಣೆ ಮೇರೆಗೆ

(i) ರೈತರ ಕೃಷಿ ಉತ್ಪನ್ನಗಳ ಬೆಲೆ ಕುಸಿದಿರುವುದರ ಬಗ್ಗೆ ಚರ್ಚೆಗೆ ಒತ್ತಾಯ.

ಶ್ರೀ ಕೆ.ಹೆಚ್. ಹನುಮೇಗೌಡ :— ಮಾನ್ಯ ಅಧ್ಯಕ್ಷರೆ, ರೈತರ ಕೃಷಿ ಉತ್ಪನ್ನಗಳ ಬೆಲೆ ಕುಸಿತದ ಬಗ್ಗೆ ಇನ್ನು ಚರ್ಚೆಯಾಗಬೇಕಾಗಿದೆ. ಆದ್ದರಿಂದ ಈ ವಿಷಯದ ಬಗ್ಗೆ ಚರ್ಚೆ ಮಾಡಲು ಮೊದಲು ಅವಕಾಶ ಕೊಡಬೇಕು.

ಅಧ್ಯಕ್ಷರು :— ಈ ವಿಷಯವನ್ನು ಮಧ್ಯಾಹ್ನ ತೆಗೆದುಕೊಳ್ಳೋಣ. ಏಕೆಂದರೆ, ಈ ವಿಷಯದ ಬಗ್ಗೆ ಚರ್ಚೆ ಪ್ರಾರಂಭ ಮಾಡಿದರೆ ಎಲ್ಲರಿಗೂ ಈಗ ಅವಕಾಶ ಕೊಡಬೇಕಾಗುತ್ತದೆ. ಆದ್ದರಿಂದ ಈಗ ಬೇಡ.

ಶ್ರೀ ಕೆ.ಹೆಚ್. ಹನುಮೇಗೌಡ :— ಮಾನ್ಯ ಮುಖ್ಯಮಂತ್ರಿಯವರು ಅಥವಾ ಕೃಷಿ ಸಚಿವರು ರೈತರನ್ನು ಸೇವೆ ಮಾಡುವುದಕ್ಕೋಸ್ಕರ ಏನು ಕ್ರಮ ತೆಗೆದುಕೊಂಡಿದ್ದಾರೆ ಎಂಬುದರ ಬಗ್ಗೆ ಒಂದು ಹೇಳಿಕೆಯನ್ನು ಕೊಟ್ಟರೆ ಸಾಕು.

(ii) ರಾಜ್ಯಕ್ಕೆ ವಿಶ್ವಬ್ಯಾಂಕ್ ಅಧ್ಯಕ್ಷರು ಬಂದಂಥ ಸಂದರ್ಭದಲ್ಲಿ ಅವರ ಜೊತೆ ಆಗಿರತಕ್ಕ ಮಾತುಕತೆಗಳ ಬಗ್ಗೆ ಮುಖ್ಯಮಂತ್ರಿಗಳ ಹೇಳಿಕೆಗೆ ಒತ್ತಾಯ.

+ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕನಕಪುರ) :— ಮಾನ್ಯ ಅಧ್ಯಕ್ಷರೆ, ಸನ್ಮಾನ್ಯ ಹನುಮೇಗೌಡರು ಹೇಳಿದ ಪ್ರಕಾರ ಕೃಷಿ ಉತ್ಪನ್ನಗಳ ಬೆಲೆ ಕುಸಿತದ ಬಗ್ಗೆ ನಡೆಯುತ್ತಿರುವ ಚರ್ಚೆ ಇನ್ನು ಪೂರ್ಣವಾಗಿಲ್ಲ. ಈ ವಿಷಯದ ಬಗ್ಗೆ ಇವರು ಕೇಂದ್ರ ಸರ್ಕಾರದ ಹತ್ತಿರ ಡೆಲಿಗೇಶನ್ ಹೋಗಬೇಕೆಂದು ಯೋಚನೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ನಾನು ಕೇಳುವುದೇನೆಂದರೆ, ರೈತರ ಕೃಷಿ ಉತ್ಪನ್ನಗಳಿಗೆ ಈಗಾಗಲೇ ಬೆಲೆ ಕುಸಿತವಾಗಿರುವ ಬಗ್ಗೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ಎಂಬುದನ್ನು ಸರ್ಕಾರ ಇಲ್ಲಿ ಸ್ಪಷ್ಟಪಡಿಸಬೇಕು. ಹಾಗೆಯೇ ನಮ್ಮ ರಾಜ್ಯಕ್ಕೆ ವಿಶ್ವಬ್ಯಾಂಕ್ ಅಧ್ಯಕ್ಷರು ಬಂದಂಥ ಸಂದರ್ಭದಲ್ಲಿ ಅದರ ಜೊತೆ ಆಗಿರತಕ್ಕಂಥ ಮಾತುಕತೆಗಳ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಯವರಿಂದ ಒಂದು ಹೇಳಿಕೆಯನ್ನು ಕೊಡಿಸುತ್ತೇನೆಂದು ನೀವು ಭರವಸೆ ಕೊಟ್ಟಿದ್ದೀರಿ. ಇದಕ್ಕೆ ಸನ್ಮಾನ್ಯ